ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 116 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪಿ.ಹೆಚ್. ಪೂಜಾರ್ |
| ಉತ್ತರಿಸುವ ದಿನಾಂಕ | 13/02/2023 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಜಿಲ್ಲೆಗೊಂದು ಸರ್ಕಾರೀ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ಪ್ರಾರಂಭಿಸಬೇಕೆನ್ನುವುದು ಸರ್ಕಾರದ ನೀತಿ ಆಗಿದೆಯೇ: | ರಾಜ್ಯದ ಪ್ರತಿ ಜಿಲ್ಲೆಗೆ ಒಂದರಂತೆ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಹಂತ ಹಂತವಾಗಿ ಒದಗಿಸುವುದು ಸರ್ಕಾರದ ನೀತಿಯಾಗಿರುತ್ತದೆ.<br>2014-15 ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿ ತುಮಕೂರು, ಚಿತ್ರದುರ್ಗ, ಬಾಗಲಕೋಟೆ, ಚಿಕ್ಕಬಳ್ಳಾಪುರ, ಹಾವೇರಿ ಮತ್ತು ಯಾದಗಿರಿ ಇಲ್ಲಿ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಪ್ರಸ್ತಾಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆ.<br>ಪ್ರಸ್ತುತ ಕೇಂದ್ರದ ನೀತಿ ಆಯೋಗದನ್ವಯ ಸರ್ಕಾರಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಲ್ಲಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ (ಪಿಪಿಪಿ) ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭ ಮಾಡುವ ಬಗ್ಗೆ ಅವಕಾಶ ಕಲ್ಪಿಸಲಾಗಿರುತ್ತದೆ. ಸರ್ಕಾರಿ ವೈದ್ಯಕೀಯ ಕಾಲೇಜುಗಳಿಲ್ಲದ ದಾವಣಗೆರೆ, ಉಡುಪಿ, ಕೋಲಾರ, ರಾಮನಗರ, ಬೆಂಗಳೂರು ಗ್ರಾಮಾಂತರ, ತುಮಕೂರು, ಬಾಗಲಕೋಟೆ, ದಕ್ಷಿಣ ಕನ್ನಡ, ಹೊಸಪೇಟೆ ಮತ್ತು ವಿಜಯಪುರ ಈ ಜಿಲ್ಲೆಗಳಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ. ಅದರಂತೆ ಪ್ರಾಥಮಿಕವಾಗಿ ದಾವಣಗೆರೆ, ಉಡುಪಿ, ಕೋಲಾರ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಬಗ್ಗೆ ಐಡೆಕ್ (iDeCK) ಸಂಸ್ಥೆಯ ಸಹಯೋಗದೊಂದಿಗೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸುವಂತೆ ಸೂಚಿಸಲಾಗಿತ್ತು.<br>ಅದರಂತೆ ಪರಿಕಲ್ಪನೆಯ ಟಿಪ್ಪಣಿ (Concept Note) ಮತ್ತು ಹರಾಜು ದಾಖಲೆಗಳನ್ನು (Bidding Documents) ತಯಾರಿಸಿ, ಪಿಪಿಪಿ ಕೋಶಕ್ಕೆ ಸಲ್ಲಿಸಿದ್ದು, ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. ಈ ಬಗ್ಗೆ ಯಾವುದೇ ಕಾಲಮಿತಿಯನ್ನು ನಿಗದಿಪಡಿಸಿರುವುದಿಲ್ಲ. |
| ಆ) | ಆ ನೀತಿಯಂತೆ ಎಳು ವರ್ಷಗಳ ಹಿಂದೆ ಬಾಗಲಕೋಟೆಯಲ್ಲಿ ಆ ಭಾಗದ ಬಡ ವಿದ್ಯಾರ್ಥಿಗಳು ಮತ್ತು ರೋಗಿಗಳಿಗಾಗಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನಗಾಗಿ ಆಯವ್ಯಯದಲ್ಲಿ ಘೋಷಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | |
| ಇ) | ಹಾಗಿದ್ದಲ್ಲಿ, ಈ ವರ್ಷವಾದರೂ ಸರ್ಕಾರ ಆ ದಿಶೆಯಲ್ಲಿ ಕ್ರಮ ಕೈಗೊಳ್ಳಲು ಮುಂದಾಗುವುದೇ? (ವಿವರ ನೀಡುವುದು) | |

ಸಂಖ್ಯೆ: ಎಂಇಡಿ 121 ಎಂಎಂಸಿ 2023

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು



Generated from eOffice by DR.K SUDHAKAR, MED-MIN(SK), MINISTER, MEDICAL EDUCATION SEC on 09/02/2023 07:59 PM